**ಪ್ರಧಾನ ಸಿವಿಲ್ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ ಚಿಂಚೋಳಿ**

**ಸಿ.ಸಿ. ನಂ.274/2018**

| | | | |
|---|---|---|---|
| **ಹೆಸರು** | **:** | **ಗಿರೀಶ** | **ದೋ.ಸಾ. 3** |
| **ತಂದೆಯ ಹೆಸರು** | **:** | **ಶ್ಯಾಮರಾವ** | **ಪ್ರಾ.ಸಾ. 2** |
| **ವಯಸ್ಸು** | **:** | **42 ವರ್ಷ** | **ದಿನಾಂಕಃ 21-04-2022** |
| **ಉದ್ಯೋಗ** | **:** | **ಗ್ರಾಮ ಪಂಚಾಯತಿ ಕಾರ್ಯದರ್ಶಿ** | |
| **ವಾಸಸ್ಥಳ** | **:** | **ಗುಲ್ಬರ್ಗಾ** | |

**ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಸಹಾಯಕ ಸರಕಾರಿ ಅಭಿಯೋಜಕರಿಂದಃ**

ಈ ಪ್ರಕರಣದ ಸಾಕ್ಷಿದಾರರಾದ ಚಾಸಾ-1 ಮತ್ತು 2 ಗೊತ್ತು. ಚಾಸಾ-1 ರವರು ತಾಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳಾಗಿದ್ದರು. ಚಾಸಾ-2 ಬೇರೆ ಊರಿನವರು.

ಈಗ ನನಗೆ ತೋರಿಸಲಾದ ದಾಖಲೆಯಲ್ಲಿರುವ ಸಹಿ ನನ್ನದೇ. ಸಾಕ್ಷಿ ನೋಡಿ ಗುರುತಿಸಿದ ದಾಖಲೆಯನ್ನು ಈಗ ನಿಪಿ-6 ಎಂದೂ, ಸಾಕ್ಷಿಯ ಸಹಿಯನ್ನು ನಿಪಿ-6(ಎ)ಎಂದು ಗುರುತಿಸಲಾಯಿತು.

2015 ನೇ ಸಾಲಿನಲ್ಲಿ ನಾನು ಚಿಂಚೋಳಿ ತಾಲೂಕು ಪಂಚಾಯತಿ ಕಾರ್ಯಾಲಯದಲ್ಲಿ ಕೆಲಸ ಮಾಡುತ್ತಿದ್ದೆ. ದಿನಾಂಕ 21-01-2015 ರಂದು ತಾಲೂಕು ಪಂಚಾಯತಿ ಕಾರ್ಯಲಯಕ್ಕೆ ಬಂದಿದ್ದ ಚಿಂಚೋಳಿ ಪೋಲೀಸರು ಈ ಪ್ರಕರಣದ ಸಾಕ್ಷಿ ಚಾಸಾ-1 ರವರು ತೋರಿಸಿದಂತೆ ನನ್ನ ಮತ್ತು ಚಾಸಾ-2 ರವರ ಸಮಕ್ಷಮ ವಂಚನೆ ಪ್ರಕರಣಕ್ಕೆ ಸಂಬಂಧಪಟ್ಟಂತೆ ನಿಪಿ-6 ರ ಸ್ಥಳ ಪಂಚನಾಮೆಯನ್ನು ಸಂಜೆ 4 ರಿಂದ 5 ಗಂಟೆಯವರೆಗೆ ಬರೆದು ನನ್ನ ಸಹಿ ಪಡೆದಿರುತ್ತಾರೆ.

**ಪಾಟೀ ಸವಾಲುಃ ಆರೋಪಿತರ ಪರವಾಗಿ ಶ್ರೀ ಎಸ್.ಎಸ್.ಎ. ವಕೀಲರಿಂದಃ**

ಸಾಮಾನ್ಯವಾಗಿ ನಾವು ನಮ್ಮ ಮೇಲಾಧಿಕಾರಿಗಳ ಆದೇಶವನ್ನು ಪಾಲನೆ ಮಾಡಬೇಕಾಗುತ್ತದೆ ಎನ್ನುವುದು ಸರಿ. ನಿಪಿ-6 ರ ಪಂಚನಾಮೆ ಜರುಗಿಸಲಾದ ಸ್ಥಳದ ಚೆಕ್ಕುಬಂದಿ ನನಗೆ ಹೇಳಲು ಬರುವುದಿಲ್ಲ. ನಿಪಿ-6 ರ ಪಂಚನಾಮೆಯನ್ನು ಯಾವ ಉದ್ದೇಶಕ್ಕೆ ಜರುಗಿಸಲಾಗಿತ್ತು ಎಂದರೆ ಸಾಕ್ಷಿ ಚೆಕ್ ತಿದ್ದುಪಡಿ ಮಾಡಿ ವಂಚನೆ ಮಾಡಲಾದ ಪ್ರಕರಣಕ್ಕೆ ಸಂಬಂಧಪಟ್ಟಂತೆ ಸದರಿ

ಪಂಚನಾಮೆಯನ್ನು ಬರೆಯಲಾಗಿದೆ ಎನ್ನುತ್ತಾರೆ. ನಿಪಿ-6 ರ ದಾಖಲೆಯಲ್ಲಿ ಏನು ಬರೆಯಲಾಗಿದೆ ಎಂದು ನನಗೆ ಗೊತ್ತಿಲ್ಲ ಎಂದರೆ ಸರಿ. . ದಿನಾಂಕ 21-01-2015 ರಂದು ತಾಲೂಕು ಪಂಚಾಯತಿ ಕಾರ್ಯಲಯಕ್ಕೆ ಬಂದಿದ್ದ ಚಿಂಚೋಳಿ ಪೋಲೀಸರು ಈ ಪ್ರಕರಣದ ಸಾಕ್ಷಿ ಚಾಸಾ-1 ರವರು ತೋರಿಸಿದಂತೆ ನನ್ನ ಮತ್ತು ಚಾಸಾ-2 ರವರ ಸಮಕ್ಷಮ ವಂಚನೆ ಪ್ರಕರಣಕ್ಕೆ ಸಂಬಂಧಪಟ್ಟಂತೆ ನಿಪಿ-6 ರ ಸ್ಥಳ ಪಂಚನಾಮೆಯನ್ನು ಸಂಜೆ 4 ರಿಂದ 5 ಗಂಟೆಯವರೆಗೆ ಬರೆದು ನನ್ನ ಸಹಿ ಪಡೆದಿರುತ್ತಾರೆ ಎಂದು ಸುಳ್ಳು ಹೇಳುತ್ತಿದ್ದೇನೆ ಎನ್ನುವುದು ಸರಿಯಲ್ಲ.

ಚಾಸಾ-1 ಮೇಲಾಧಿಕಾರಿಗಳು ಹೇಳಿದಂತೆ ನಿಪಿ-6 ರ ದಾಖಲೆಗೆ ಸಹಿ ಮಾಡಿದ್ದು ನನ್ನ ಮುಂದೆ ಯಾವುದೇ ಪಂಚನಾಮೆ ಜರುಗಿಸಿಲ್ಲ ಎನ್ನುವುದು ಸರಿಯಲ್ಲ. ನಿಮ್ಮನ್ನು ಪಂಚನಾಮೆಗೆ ಸಹಿ ಮಾಡುವಂತೆ ಯಾರು ಕರೆದರು ಎಂದರೆ ಸಾಕ್ಷಿ ನಾನು ಪಂಚಾಯತಿ ಕಾರ್ಯಾಲಯದಲ್ಲಿ ಇದ್ದೆ ನನ್ನನ್ನು ಯಾರೂ ಕರೆದಿಲ್ಲ ಎನ್ನುತ್ತಾರೆ.

**ಮರುವಿಚಾರಣೆಃ ಇಲ್ಲಾ**

**(ಮುಕ್ತ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**
**ಓ.ಹೇ.ಕೇ. ಸರಿ ಇದೆ.**

**ಪ್ರಧಾನ ಪ್ರ.ದ.ನ್ಯಾ.ದಂ. ಚಿಂಚೋಳಿ**